## ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/99/2024-25

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು
ದಿನಾಂಕ: 30-08-2024

### ಪ್ರಕಟಣೆ

ವಿಷಯ: 2024-25ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 243 ಡಿಸಿಇ 2024(ಇ), ದಿ:19.08.2024.

* * * * * * *

2024-25ನೇ ಶೈಕ್ಷಣಿಕ ಸಾಲಿನಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ (ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳೂ ಒಳಗೊಂಡಂತೆ) ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು (ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ಒಳಗೊಂಡಂತೆ) ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಈ ಕೆಳಕಂಡಂತೆ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುದು.

### I. ತಾತ್ಕಾಲಿಕ ವೇಳಾಪಟ್ಟಿ:

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: | 31.08.2024 |
| 2. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 07.09.2024 |
| 3. | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 08.09.2024 |
| 4. | ಸಲ್ಲಿಸಿರುವ ಅರ್ಜಿಯನ್ನು EDIT ಮಾಡಲು | 9th and 10th Sept 2024 |
| 5. | ಕಾರ್ಯಭಾರ ಪ್ರಕಟಿಸುವ ದಿನಾಂಕ: | 11th Sept 2024 |
| 6. | ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕಗಳು; | 17th Sept 2024 onwards |
| ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ dce.karnataka.gov.in ಸಂಪರ್ಕಿಸುವುದು. | | |

### II. ಆಯ್ಕೆ ಪ್ರಕ್ರಿಯೆ:

ಈ ಕೆಳಕಂಡ ಮಾನದಂಡಗಳನ್ವಯ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಲಿಸ್ಟ್ (Merit List) ಅನ್ನು ಪ್ರಕಟಿಸಲಾಗುವುದು.

| ಕ್ರ. ಸಂ. | ವಿದ್ಯಾರ್ಹತೆ | ಗರಿಷ್ಠ ಅಂಕಗಳು |
|---|---|---|
| 1. | ವಿದ್ಯಾರ್ಹತೆ: ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25%ನ್ನು ಗಣನೆಗೆ ತೆಗೆದುಕೊಳ್ಳಲಾಗುವುದು. *(ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 25ರಷ್ಟು ಭಾಗವನ್ನು ಅಂದರೆ 15 ಅಂಕಗಳು)* | 25 |

| | | |
|---|---|---|
| 2. | <u>ಹೆಚ್ಚುವರಿ ವಿದ್ಯಾರ್ಹತೆ:</u><br>1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್‌ಇಟಿ/ಕೆ-ಸೆಟ್/ಎಸ್‌ಎಲ್‌ಇಟಿ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | 12<br>09<br>06 |
| 3. | <u>ಅನುಭವ:</u> ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸಲಾಗುವುದು.<br>ಸೇವೆಗೆ ಅಂಕಗಳನ್ನು ನಿರ್ಧರಿಸಲು ಪ್ರತಿ ಶೈಕ್ಷಣಿಕ ವರ್ಷದ 8 ತಿಂಗಳು ಮತ್ತು ಹೆಚ್ಚಿನ ಅವಧಿಯ (ಅಂದರೆ, ಶೈಕ್ಷಣಿಕ ವರ್ಷದಲ್ಲಿ 240 ದಿನಗಳ) ಸೇವೆಯನ್ನು ಒಂದು ವರ್ಷ ಎಂದು ಪರಿಗಣಿಸಲಾಗುವುದು. ಶೈಕ್ಷಣಿಕ ವರ್ಷದಲ್ಲಿನ 8 ತಿಂಗಳಿಗಿಂತ ಕಡಿಮೆ ಅವಧಿಯ ಸೇವೆಯನ್ನು ಭಾಗಶಃ ವರ್ಷವೆಂದೂ ಪರಿಗಣಿಸಿ ಒಟ್ಟು ಸೇವಾವಧಿಗೆ ಪರಿಗಣಿಸಲಾಗುವುದು. | 48 |
| | **ಒಟ್ಟು** | **100** |
| | ಅರ್ಹ ವಿಕಲಚೇತನ ಅಭ್ಯರ್ಥಿಗಳಿಗೆ ಹೆಚ್ಚುವರಿಯಾಗಿ 10 ಅಂಕಗಳನ್ನು ನೀಡಲಾಗುವುದು. | |

1. ಮೇಲೆ ತಿಳಿಸಿದ ಮಾನದಂಡಗಳನ್ನು ಅನುಸರಿಸಿ, ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ವಿದ್ಯಾರ್ಹತೆ ಮತ್ತು ಸೇವಾ ವಿವರಗಳ ಆಧಾರದ ಮೇಲೆ ರಾಜ್ಯವ್ಯಾಪಿ ಮೆರಿಟ್ ಪಟ್ಟಿ (State-wise Merit List) ಅನ್ನು ಪ್ರಕಟಿಸಲಾಗುವುದು.

2. 2024-25ನೇ ಸಾಲಿನಲ್ಲಿ ಉಪನ್ಯಾಸಕರ ವರ್ಗಾವಣೆ ಹಾಗೂ ಹೊಸ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ನೇಮಕಾತಿ/ವರ್ಗಾವಣೆಗೊಂಡ ಖಾಯಂ ಉಪನ್ಯಾಸಕರು ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದರಿಂದ ಕಾಲೇಜುಗಳಲ್ಲಿ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರದಲ್ಲಿ ವ್ಯತ್ಯಯವಾಗುವ ಸಂಭವವಿರುತ್ತದೆ. ಆದ್ದರಿಂದ ಪ್ರಾರಂಭಿಕವಾಗಿ ಕಾಲೇಜುಗಳಲ್ಲಿ ವಿಷಯವಾರು ಮಂಜೂರಾಗಿರುವ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಉಪನ್ಯಾಸಕರಿಗೆ ಹಾಗೂ ಮಂಜೂರಾಗಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ (Sanctioned but presently vacant posts) ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

   a) 2023-24ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿ, 2024-25ನೇ ಸಾಲಿಗೆ ಅತಿಥಿ ಉಪನ್ಯಾಸಕ ಸೇವೆಗೆ ಅರ್ಜಿ ಸಲ್ಲಿಸಿ ಅವಶ್ಯಕ ಮೆರಿಟ್ ಪಡೆಯುವ ಹಾಗೂ 2023-24ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿದ ಕಾಲೇಜಿನಲ್ಲಿಯೇ ಮುಂದುವರೆಯಲು ಇಚ್ಛಿಸುವ ಅಭ್ಯರ್ಥಿಗಳನ್ನು ಸದರಿ ಕಾಲೇಜಿನಲ್ಲಿನ ಕಾರ್ಯಭಾರದ ಲಭ್ಯತೆಗೆ ಅನುಸಾರವಾಗಿ ಅದೇ ಕಾಲೇಜಿನಲ್ಲಿ ಮುಂದುವರೆಯಲು ಅವಕಾಶ ಕಲ್ಪಿಸಲಾಗುವುದು.

   b) 2023-24ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿದ್ದ ಅಭ್ಯರ್ಥಿಗಳು ಅದೇ ಕಾಲೇಜಿನಲ್ಲಿ 2023-24ನೇ ಸಾಲಿನಲ್ಲಿಯೂ ಮುಂದುವರೆಯಲು ಇಚ್ಛಿಸಿದಲ್ಲಿ ಅಭ್ಯರ್ಥಿಗಳು ಆನ್-ಲೈನ್ ಅರ್ಜಿಯಲ್ಲಿ Continuation Option ಅನ್ನು ಆಯ್ಕೆ ಮಾಡುವ ಮುನ್ನ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಂದ ಕಾರ್ಯಭಾರದ ಮಾಹಿತಿಯನ್ನು ಪಡೆದುಕೊಳ್ಳುವುದು.

   c) ಕೌನ್ಸೆಲಿಂಗ್ ವೇಳೆಗೆ ಕಾಲೇಜು ಪ್ರಾಂಶುಪಾಲರಿಂದ eMIS ಮೂಲಕ ಪಡೆದ ಕಾರ್ಯಭಾರದ ಮಾಹಿತಿಯನ್ನು ಆಧರಿಸಿ 2023-24ನೇ ಸಾಲಿನಲ್ಲಿ ಕಾರ್ಯನಿರ್ವಹಿಸಿದ ಕಾಲೇಜಿನಲ್ಲಿ 2024-25ನೇ ಸಾಲಿನಲ್ಲಿಯೂ ಮುಂದುವರಿಯಲು ಸಾಧ್ಯವಿರುವ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುವುದು.

   d) ಮೊದಲನೇ ಸುತ್ತಿನ ಕೌನ್ಸಿಲಿಂಗ್ ನಂತರವೂ ಕಾರ್ಯಭಾರ ಉಳಿಕೆಯಾದಲ್ಲಿ ಅಂತಹ ಕಾರ್ಯಭಾರಕ್ಕನುಗುಣವಾಗಿ ಮುಂದಿನ ಸುತ್ತಿನಲ್ಲಿ ಕೌನ್ಸಿಲಿಂಗ್ ಮೂಲಕ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆಮಾಡಿಕೊಳ್ಳಲಾಗುವುದು.

3. 2023-24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು Guest Faculty ID ಮತ್ತು OTP ಬಳಸಿ 2024-25ನೇ ಸಾಲಿಗೆ ಆನ್-ಲೈನ್ ಅರ್ಜಿಗಳನ್ನು UPDATE ಮಾಡುವ ಮೂಲಕ ಸಲ್ಲಿಸಲು ಅವಕಾಶ ಮಾಡಲಾಗಿರುತ್ತದೆ. ಈ ರೀತಿ Update ಮಾಡಿದ ನಂತರ ಹೊಸ ID ಸೃಜನೆಯಾಗುವುದು. ಹೊಸದಾಗಿ ಸೃಜನೆಯಾಗುವ ID ಯು ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಅನ್ವಯವಾಗುವುದು.

4. ರಾಜ್ಯವ್ಯಾಪಿ ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಲ್ಲಿ ವಿಷಯವಾರು ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ಅಗತ್ಯವಿರುವ ಅರ್ಹ ಅಭ್ಯರ್ಥಿಗಳ ರಾಜ್ಯವ್ಯಾಪಿ ಆಯ್ಕೆಪಟ್ಟಿ (State-wise Selection List) ಅನ್ನು ಪ್ರಕಟಿಸಲಾಗುವುದು ಹಾಗೂ ರಾಜ್ಯವ್ಯಾಪಿ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

5. ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:13.09.2023. ರಲ್ಲಿ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಕಂಡಿಕೆ (3) ಮತ್ತು (13) ರಂತೆ ಅನ್ವಯವಾಗುವ ಮೀಸಲಾತಿ ನಿಗಧಿಪಡಿಸಿ, ಮೀಸಲಾತಿಗೊಳಪಡುವ ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಂದಲೇ ಭರ್ತಿ ಮಾಡಿಕೊಳ್ಳುವಂತೆ ಸೂಚಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುವುದು.

6. ಆಯ್ಕೆಯಾಗುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಡಿಸಿಇ 2024(ಇ) (ಭಾಗ-1), ದಿನಾಂಕ:04.03.2024 ಮತ್ತು ತಿದ್ದುಪಡಿ ಆದೇಶ ದಿನಾಂಕ:16.03.2024 ರನ್ವಯ ಕೆಳಗಿನಂತೆ ನಿಗಧಿಪಡಿಸಿರುವ ಪರಿಷ್ಕೃತ ಗೌರವಧನವನ್ನು ನಿಯಮಾನುಸಾರ ನಿರ್ವಹಿಸುವ ಕಾರ್ಯಭಾರಕ್ಕೆ ಹಾಗೂ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿರುವ ಅರ್ಹತೆಗೆ (ವಿದ್ಯಾರ್ಹತೆ/ಸೇವಾ ಅವಧಿ) ಅನುಗುಣವಾಗಿ ಪರಿಗಣಿಸಲಾಗುವುದು.

| ಕ್ರ. ಸಂ. | ಸೇವಾವಧಿ ಮತ್ತು ವಿದ್ಯಾರ್ಹತೆ | ಗೌರವಧನದ ಮೊತ್ತ |
|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 35,000/- |
| 2 | 5 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 31,000/- |
| 3 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 38,000/- |
| 4 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 34,000/- |
| 5 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 39,000/- |
| 6 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ಹೊಂದಿಲ್ಲದವರಿಗೆ | 35,000/- |
| 7 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 40,000/- |
| 8 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವೆ ಸಲ್ಲಿಸಿರುವ ಹಾಗೂ ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 36,000/- |

7. ಅತಿಥಿ ಉಪನ್ಯಾಸಕರಿಗೆ ಕಲಾ/ವಾಣಿಜ್ಯ/ಭಾಷಾ ವಿಷಯಗಳಿಗೆ ಗರಿಷ್ಠ 15 ಗಂಟೆಗಳ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿರುವ ವಿಷಯಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ಮಾತ್ರ ಹಂಚಿಕೆ ಮಾಡಲಾಗುವುದು ಹಾಗೂ 15/19 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದಲ್ಲಿ ಎಷ್ಟು ಗಂಟೆಗಳ ಕಾರ್ಯಭಾರ ಲಭ್ಯವಿದೆಯೋ ಅದಕ್ಕೆ ಅನುಗುಣವಾಗಿ ಗೌರವಧನವನ್ನು ಪರಿಗಣಿಸಲಾಗುವುದು.

8. ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ಗ್ರಂಥಪಾಲಕರ ಹುದ್ದೆಗಳು ಖಾಲಿ ಇರುವ ಕಾಲೇಜುಗಳಲ್ಲಿ ಅತಿಥಿ ದೈಹಿಕ ಶಿಕ್ಷಣ ಹಾಗೂ ಅತಿಥಿ ಗ್ರಂಥಪಾಲಕರ ಸೇವೆಯನ್ನು ಬಳಸಿಕೊಳ್ಳಲು ಉದ್ದೇಶಿಸಲಾಗಿದ್ದು, ಅವರಿಗೆ 19 ಗಂಟೆಗಳ ಕಾರ್ಯಭಾರವನ್ನು ನಿಗಧಿಗೊಳಿಸಿ ಆಯ್ಕೆ ಮಾಡಲಾಗುವುದು.

9. ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಈ ಹಿಂದೆ ಸಲ್ಲಿಸಿರುವ ಸೇವೆಯ ಸೇವಾನುಭವ ವಿವರಗಳನ್ನು ಪ್ರಾಂಶುಪಾಲರಿಂದ ನಿಗಧಿತ ನಮೂನೆಯಲ್ಲಿ ಪಡೆದು, ಸದರಿ ಸೇವಾ ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ಯಥಾವತ್ತಾಗಿ ನಮೂದಿಸುವುದು. (ಸೇವಾ ಪ್ರಮಾಣ ಪತ್ರದ ನಮೂನೆಯನ್ನು ಇದರೊಂದಿಗೆ ಲಗತ್ತಿಸಿದೆ)

10. ಹಿಂದಿನ ವರ್ಷಗಳ ಸೇವಾ ವಿವರಗಳನ್ನು ನಿಗಧಿತ ನಮೂನೆಯಲ್ಲಿ ಪ್ರಾಂಶುಪಾಲರಿಂದ ಈಗಾಗಲೇ ಪಡೆದಿದ್ದಲ್ಲಿ, 2023-24ನೇ ಸಾಲಿನ ಸೇವಾ ವಿವರಗಳನ್ನು ಮಾತ್ರ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ಪಡೆದು, ಆನ್‌ಲೈನ್ ಅರ್ಜಿಯಲ್ಲಿ ನಮೂದಿಸುವುದು.

11. ಅತಿಥಿ ಉಪನ್ಯಾಸಕ ಸೇವೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 01 ವಿಷಯಕ್ಕೆ ಒಂದೇ ಅರ್ಜಿಯನ್ನು ಮಾತ್ರ ಸಲ್ಲಿಸುವುದು. ಒಂದೇ ವಿಷಯಕ್ಕೆ ಒಂದಕ್ಕಿಂತ ಹೆಚ್ಚಿನ ಅರ್ಜಿಗಳನ್ನು ಸಲ್ಲಿಸಿದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

12. ಕರ್ನಾಟಕ ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅರೆಕಾಲಿಕ/ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಸೇವೆಯನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು.

13. ಮೆರಿಟ್ ಪಟ್ಟಿ ಪ್ರಕಾರ / ಕೌನ್ಸಿಲಿಂಗ್ ಮೂಲಕ ಕಾಲೇಜುಗಳಿಗೆ ಹಂಚಿಕೆಯಾಗುವ ಅಭ್ಯರ್ಥಿಗಳು ಆಯ್ಕೆ/ಹಂಚಿಕೆ ಪಟ್ಟಿ ಪ್ರಕಟಣೆಯಾದ ನಂತರ 03 ದಿನಗಳೊಳಾಗಿ ಸಂಬಂಧಪಟ್ಟ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಬೇಕಾಗಿರುತ್ತದೆ. 15/19 ಗಂಟೆಗಳ (ಪೂರ್ಣ ಕಾಲಿಕ) ಕಾರ್ಯಭಾರಕ್ಕೆ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು ಇತರೆ ಕಾಲೇಜು/ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸಲು ಅವಕಾಶವಿರುವುದಿಲ್ಲ.

14. ಅಭ್ಯರ್ಥಿಗಳು ಅನ್‌ಲೈನ್ ಅರ್ಜಿಯಲ್ಲಿ ನೀಡಿರುವ ವಿವರಗಳಂತೆ, ಅಗತ್ಯ ದಾಖಲೆಗಳನ್ನು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸುವುದು ಕಡ್ಡಾಯವಾಗಿರುತ್ತದೆ. ಮುಂದುವರೆದು, ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸುವ ವಿದ್ಯಾರ್ಹತೆ / ಕಲ್ಯಾಣ ಕರ್ನಾಟಕ ಸ್ಥಳೀಯ ಅಭ್ಯರ್ಥಿಯ ಪ್ರಮಾಣ ಪತ್ರ / ಸೇವಾ ಪ್ರಮಾಣ ಪತ್ರ ಮತ್ತಿತರೆ ಅವಶ್ಯಕ ದಾಖಲೆಗಳನ್ನು ಪ್ರಾಂಶುಪಾಲರ ಮೂಲಕ ಒಂದು ಬಾರಿಯ ಕ್ರಮವಾಗಿ ಇಲಾಖೆಯ ಇ.ಐ.ಎಂ.ಎಸ್. ನಲ್ಲಿ upload ಮಾಡಲಾಗುವುದು. ಮುಂದಿನ ಶೈಕ್ಷಣಿಕ ವರ್ಷದಿಂದ ಅಗತ್ಯವಿರುವ ದಾಖಲೆಗಳನ್ನು ಮಾತ್ರ ಪಡೆಯಲಾಗುವುದು.

15. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ವಿದ್ಯಾರ್ಹತೆ, ಸೇವಾ ವಿವರಗಳು ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ನಮೂದಿಸುವಾಗ ತಪ್ಪಾಗದಂತೆ ಗಮನಹರಿಸಿ ಸರಿಯಾದ/ನಿಖರ ಮಾಹಿತಿಯನ್ನು ದಾಖಲಿಸುವುದು.

16. ಆದಾಗ್ಯೂ, ಕಣ್ ತಪ್ಪಿನಿಂದಾಗಿ ತಪ್ಪಾದ ಮಾಹಿತಿಯನ್ನು ನಮೂದಿಸಿರುವುದು ಕಂಡುಬಂದಲ್ಲಿ ಕೂಡಲೇ ಗಮನಹರಿಸಿ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಸರಿಪಡಿಸಿಕೊಳ್ಳಲು (edit) ಸಹ ಅವಕಾಶವಿರುತ್ತದೆ. ಒಂದು ವೇಳೆ ಕೊನೆಯ ದಿನಾಂಕದ ನಂತರ ಮಾಹಿತಿಯನ್ನು ಸರಿಪಡಿಸಿಕೊಳ್ಳಲು ಮನವಿ/ಕೋರಿಕೆ ಸಲ್ಲಿಸಿದಲ್ಲಿ ಅಂತಹ ಯಾವುದೇ ಕೋರಿಕೆ/ಮನವಿಗಳನ್ನು ಪರಿಗಣಿಸುವುದಿಲ್ಲ ಎಂಬುದನ್ನು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

17. ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರ ಸೇವೆಗಾಗಿ ಅನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರುವ ಶೈಕ್ಷಣಿಕ ಅರ್ಹತೆ ಹಾಗೂ ಸೇವಾ ವಿವರಗಳನ್ನು ಮಾತ್ರ 2024-25ನೇ ಸಾಲಿಗೆ ಪರಿಗಣಿಸಲಾಗುವುದು. ಅರ್ಜಿ ಸಲ್ಲಿಸಿದ ಕೊನೆಯ ದಿನಾಂಕದ ನಂತರ ಅಥವಾ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಪಡೆಯಬಹುದಾದ ಯಾವುದೇ ಶೈಕ್ಷಣಿಕ ಅರ್ಹತೆ ಹಾಗೂ ಸೇವಾ ವಿವರಗಳ ದಾಖಲೆಗಳನ್ನು 2024-25ನೇ ಸಾಲಿಗೆ ಗೌರವಧನ ಪರಿಷ್ಕರಣೆ ಹಾಗೂ ಮೆರಿಟ್ ಪಟ್ಟಿಗೆ ಪರಿಗಣಿಸುವುದಿಲ್ಲ.

18. 2024-25ನೇ ಸಾಲಿಗೆ ಆಯ್ಕೆಯಾಗುವ ಅತಿಥಿ ಉಪನ್ಯಾಸಕರನ್ನು ಈ ಕೆಳಕಂಡಂತೆ ಕರ್ತವ್ಯದಿಂದ ಬಿಡುಗಡೆ ಮಾಡಲಾಗುವುದು.

    a) ಮೊದಲನೇ ಸುತ್ತಿನ ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗುವ ಅತಿಥಿ ಉಪನ್ಯಾಸಕರನ್ನು ಕರ್ತವ್ಯಕ್ಕೆ ಹಾಜರಾಗುವ ದಿನದಿಂದ ಅನ್ವಯಿಸಿ 10 ತಿಂಗಳ ಅವಧಿಗೆ ಸೀಮಿತಗೊಳಿಸಿ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು.

    b) ಮೊದಲನೇ ಸುತ್ತಿನ ಕೌನ್ಸಿಲಿಂಗ್ ನಂತರವೂ ಕಾರ್ಯಭಾರವಿದ್ದಲ್ಲಿ ಅಂದರೆ, ಶೈಕ್ಷಣಿಕ ವರ್ಷದ ಮಧ್ಯಭಾಗದಲ್ಲಿ ಕಾರ್ಯಭಾರ ಹೆಚ್ಚಳ/ ವ್ಯತ್ಯಾಸಕ್ಕೆ ಅನುಗುಣವಾಗಿ ಆಯ್ಕೆಗೊಂಡು ವಿವಿಧ ದಿನಾಂಕಗಳಂದು ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅತಿಥಿ ಉಪನ್ಯಾಸಕರಿಗೆ 10 ತಿಂಗಳ ಅವಧಿ ಅನ್ವಯಿಸಲು ಅವಕಾಶವಿರುವುದಿಲ್ಲವಾದ್ದರಿಂದ ಆಯಾ ವಿಶ್ವವಿದ್ಯಾಲಯಗಳ 2024-25ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯನ್ವಯ ಶೈಕ್ಷಣಿಕ ವರ್ಷದ ಕೊನೆಯ ದಿನದಂದು ಕಡ್ಡಾಯವಾಗಿ ಬಿಡುಗಡೆಗೊಳಿಸಲಾಗುವುದು.

19. ಕೌನ್ಸಿಲಿಂಗ್ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಆಯಾ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಅವರ ಬದಲಿಗೆ ಮೆರಿಟ್ ಪಟ್ಟಿಯಲ್ಲಿನ ನಂತರದ ಅಭ್ಯರ್ಥಿಯನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು.

20. ವಿವಿಧ ಕಾರಣಗಳಿಂದ ನಿಗಧಿತ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸದ ಅಥವಾ ಭಾಗವಹಿಸಿ ಕಾಲೇಜು ಆಯ್ಕೆ ಮಾಡಿಕೊಳ್ಳದ ಹಾಗೂ ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳಿಗೆ ಪುನಃ ಎರಡನೇ ಬಾರಿಗೆ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ.

21. ಆನ್‌ಲೈನ್ ಅರ್ಜಿಯಲ್ಲಿ ಕಲ್ಯಾಣ-ಕರ್ನಾಟಕ ಮೀಸಲಾತಿ ಕೋರಿಕೆ ಸಲ್ಲಿಸಿ, ಅದರನ್ವಯ ಆಯ್ಕೆಗೊಂಡು ಸಂಬಂಧಪಟ್ಟ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಲ್ಯಾಣ-ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರವನ್ನು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸಲು ವಿಫಲರಾದಲ್ಲಿ ಅಥವಾ ಹಾಜರುಪಡಿಸಿದ ಪ್ರಮಾಣ ಪತ್ರವು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

22. ಆಯ್ಕೆಯಾದ ಅತಿಥಿ ಉಪನ್ಯಾಸಕರು ಆನ್‌ಲೈನ್ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದಲ್ಲಿ, ಅಂತಹ ತಪ್ಪು ಮಾಹಿತಿ / ನ್ಯೂನ್ಯತೆಗಳಿಗೆ ಸಂಬಂದಪಟ್ಟ ಅತಿಥಿ ಉಪನ್ಯಾಸಕರೇ ಜವಾಬ್ದಾರರಾಗಿರುತ್ತಾರೆ. ಆಯ್ಕೆಯಾದ ಅತಿಥಿ ಉಪನ್ಯಾಸಕರು ಕಾಲೇಜಿನಲ್ಲಿ ಹಾಜರುಪಡಿಸುವ ವಿದ್ಯಾರ್ಹತೆಯ ಅಂಕಪಟ್ಟಿಗಳು, ವಿಕಲಚೇತನರ ಪ್ರಮಾಣ ಪತ್ರ, ಕಲ್ಯಾಣ ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರ, ಸೇವಾ ಅವಧಿಯ ಪ್ರಮಾಣ ಪತ್ರಗಳು ಹಾಗೂ ಇತರೆ ಅಗತ್ಯ ದಾಖಲೆಗಳಲ್ಲಿ ತಪ್ಪು/ನ್ಯೂನ್ಯತೆ ಅಥವಾ 'ನಕಲಿ' ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಕೈಬಿಟ್ಟು, ಅವರುಗಳ ವಿರುದ್ಧ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು.

23. ಹೊಸ ನೇಮಕಾತಿ/ ವರ್ಗಾವಣೆ/ ನಿಯೋಜನೆ/ ಮರು-ಹಂಚಿಕೆ (redeployment) ಹಾಗೂ ಇನ್ನಿತರ ಕಾರಣದಿಂದಾಗಿ ಖಾಯಂ ಉಪನ್ಯಾಸಕರು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದಾಗ ಅಥವಾ ಸೆಮಿಸ್ಟರ್ ಅವಧಿಯಲ್ಲಿ ಕಾರ್ಯಭಾರ ಕಡಿಮೆಯಾದಾಗ ಅಥವಾ ಇತರೆ ಕಾರಣಗಳಿಂದ ಕಾರ್ಯಭಾರ ಕೊರತೆಯಾದಲ್ಲಿ ಆ ಕಾಲೇಜಿಗೆ ಸಂಬಂಧಪಟ್ಟ ವಿಷಯದಲ್ಲಿ ಕೊನೆಯದಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಲಾಗುವುದು.

24. ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರಲ್ಲಿ ಜಾರಿಗೊಳಿಸಿರುವ ಮಾನದಂಡಗಳಲ್ಲಿನ ಕ್ರಮ ಸಂಖ್ಯೆ (6) ರಲ್ಲಿ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆಯನ್ನು ಹೊಂದಿಲ್ಲದ ಅತಿಥಿ ಉಪನ್ಯಾಸಕ ಆಕಾಂಕ್ಷಿಗಳಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಧಿ ನೀಡಲಾಗಿದ್ದು, ಅದರಂತೆ ಅತಿಥಿ ಉಪನ್ಯಾಸಕ ಆಕಾಂಕ್ಷಿಗಳು ದಿನಾಂಕ:13.01.2025 ರೊಳಗೆ ನಿಗಧಿತ ಯು.ಜಿ.ಸಿ. ವಿದ್ಯಾರ್ಹತೆಯನ್ನು ಪಡೆಯಬೇಕಾಗಿರುತ್ತದೆ.

25. ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳುವುದರಿಂದ ಸದರಿ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಖಾಯಂ ಮಾಡಲು ಮತ್ತು ಸಹಾಯಕ ಪ್ರಾಧ್ಯಾಪಕರ ಹುದ್ದೆಯ ನೇಮಕಾತಿಯಲ್ಲಿ ಆದ್ಯತೆ ನೀಡಲು ಅವಕಾಶ ಇರುವುದಿಲ್ಲ ಹಾಗೂ ಈ ಬಗ್ಗೆ ಕೃಪಾಂಕ ಕೋರಲು ಸಹ ಯಾವುದೇ ಹಕ್ಕು ಇರುವುದಿಲ್ಲ.

26. ಆನ್‌ಲೈನ್ ಮೂಲಕ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುತ್ತಿರುವ ಕುರಿತು ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದರೊಂದಿಗೆ, ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾಹಿತಿಯನ್ನು ನೀಡುವುದು.

27. ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಅಂತರ್ಜಾಲ ತಾಣವನ್ನು ಪ್ರತಿನಿತ್ಯ ಗಮನಿಸಲು ತಿಳಿಸಲಾಗಿದೆ.

**ಆಯುಕ್ತರು**
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ,**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಕಛೇರಿ ಪ್ರತಿ.

ನಮೂನೆ:

## ಸೇವಾ ಪ್ರಮಾಣ ಪತ್ರ

ಕಾಲೇಜಿನ ಹೆಸರು:______________________________

ಅತಿಥಿ ಉಪನ್ಯಾಸಕರ ಹೆಸರು:______________________

| Academic Year | ODD Semester | | EVEN Semester | |
|---|---|---|---|---|
| | Number of Months worked | Number of Days worked | Number of Months worked | Number of Days worked |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |

- ಮೇಲ್ಕಂಡ ಅತಿಥಿ ಉಪನ್ಯಾಸಕರು ಸ್ನಾತಕೋತ್ತರ ತರಗತಿಗಳನ್ನು ಬೋಧಿಸಿರುವರೇ? (ಹೌದು/ಇಲ್ಲ); ______
- ವಿ.ಸೂ: 1. ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸಿದ ವರ್ಷಗಳಿಗೆ ಮಾತ್ರ ಸೇವಾ ವಿವರಗಳನ್ನು ನಮೂದಿಸುವುದು.

  2. ಅತಿಥಿ ಉಪನ್ಯಾಸಕರ ಸೇವೆಯನ್ನು ತಿಂಗಳು ಮತ್ತು ದಿನಗಳಲ್ಲಿ (Months and Days) ಮಾತ್ರ ನಮೂದಿಸುವುದು ಹಾಗೂ ದಿನಾಂಕಗಳಲ್ಲಿ ನಮೂದಿಸಬಾರದು.

  3. **Annual System of Years** (Non-semester) ಗೆ ಸಂಬಂಧಿಸಿದ ಸೇವಾ ವಿವರಗಳನ್ನು **ODD Semester** ಕಲಂಗಳ ಅಡಿಯಲ್ಲಿ ತಿಂಗಳು ಮತ್ತು ದಿನಗಳಲ್ಲಿ ನಮೂದಿಸುವುದು.

ಪ್ರಾಂಶುಪಾಲರ ಸಹಿ, ಮೊಹರಿನೊಂದಿಗೆ